**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 409 (443)
ಸದಸ್ಯರ ಹೆಸರು : ಡಾ: ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 10-03-2025
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

<table>
<tr><th>ಕ್ರಮ ಸಂಖ್ಯೆ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಲ್ಯಾಣ ಕರ್ನಾಟಕ ಭಾಗದ ಸರಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಹುದ್ದೆಗಳ ಸಂಖ್ಯೆ ಎಷ್ಟು:</td><td>ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ-<br>ಬೋಧಕ ಹುದ್ದೆಗಳು :768.<br>ಬೋಧಕೇತರ ಹುದ್ದೆಗಳು :195.</td></tr>
<tr><td>ಆ)</td><td>ಸದರಿ ಹುದ್ದೆಗಳ ಭರ್ತಿಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ: ಇಲ್ಲದಿದ್ದಲ್ಲಿ ಕ್ರಮ ಕೈಗೊಳ್ಳಲಾಗುವುದು ಯಾವಾಗ? (ವಿವರ ನೀಡುವುದು)</td><td>ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ವಿವಿಧ ವಿಷಯಗಳ 36 ಉಪನ್ಯಾಸಕರ ಹುದ್ದೆಗಳ ಭರ್ತಿಗೆ ಅನುಮತಿ ನೀಡಲಾಗಿರುತ್ತದೆ. ಹುದ್ದೆಗಳ ವಿವರ ಈ ಕೆಳಕಂಡಂತಿದೆ-<br><table><tr><th>ವಿಷಯ</th><th>ಕಲ್ಯಾಣ ಕರ್ನಾಟಕ</th></tr><tr><td>ಕನ್ನಡ</td><td>05</td></tr><tr><td>ಇಂಗ್ಲೀಷ್</td><td>05</td></tr><tr><td>ಇತಿಹಾಸ</td><td>04</td></tr><tr><td>ಅರ್ಥಶಾಸ್ತ್ರ</td><td>04</td></tr><tr><td>ವಾಣಿಜ್ಯಶಾಸ್ತ್ರ</td><td>10</td></tr><tr><td>ಸಮಾಜಶಾಸ್ತ್ರ</td><td>04</td></tr><tr><td>ರಾಜ್ಯಶಾಸ್ತ್ರ</td><td>04</td></tr><tr><td>ಒಟ್ಟು</td><td>36</td></tr></table><br>ಇದಲ್ಲದೆ, ಕಲ್ಯಾಣ ಕರ್ನಾಟಕ ಪ್ರಾದೇಶಿಕ ಸ್ಥಳೀಯ ವೃಂದ ಮತ್ತು ರಾಜ್ಯ ಮಟ್ಟದ ಸ್ಥಳೀಯ ವೃಂದ ಒಳಗೊಂಡಂತೆ ನೇರ ನೇಮಕಾತಿ ಕೋಟಾದ ಒಟ್ಟು 405 ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ನಿರ್ದೇಶನಾಲಯದ ಏಕ ಕಡತ ಸಂಖ್ಯೆ:DPUE-EST10LAP/2/2024-ADMN (1525725) ರಲ್ಲಿ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿರುತ್ತದೆ. ಈ ಬಗ್ಗೆ ಆರ್ಥಿಕ ಇಲಾಖೆಯು ಸಹಮತಿ ನೀಡಿದ ನಂತರ ಸದರಿ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮವಹಿಸಲಾಗುವುದು.</td></tr>
</table>

| | | |
|---|---|---|
| | | ಮುಂದುವರೆದು, ಖಾಲಿ ಇರುವ 195 ಬೋಧಕೇತರ ಹುದ್ದೆಗಳಲ್ಲಿ ಪ್ರಥಮ ದರ್ಜೆ ಸಹಾಯಕರು ಮತ್ತು ದ್ವಿತೀಯ ದರ್ಜೆ ಸಹಾಯಕರು ಮತ್ತು ಡಿ ದರ್ಜೆ ಹುದ್ದೆಗಳನ್ನು ಅನುಕಂಪದ ಆಧಾರದ ಮೇಲೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಪ್ರಸ್ತುತ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆರವರ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೇನೆನಿ 2024 ದಿನಾಂಕ: 25-11-2024ರಲ್ಲಿ "ದಿನಾಂಕ: 28.10.2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿರುತ್ತದೆ"<br>ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಇಲಾಖೆಯ ಸುತ್ತೋಲೆಯಂತೆ ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿಯವರಿಗೆ ಒಳ ಮೀಸಲಾತಿಯನ್ನು ನಿಗಧಿಪಡಿಸಿ ಅಂತಿಮವಾಗಿ ಆದೇಶವಾದ ನಂತರ ಸದರಿ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗುವುದು. |

ಸಂಖ್ಯೆ: ಇಪಿ 95 ಡಿಜಿಡಬ್ಲೂ 2025

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು